ಕರ್ನಾಟಕ ಸರ್ಕಾರ

**ಪೊಲೀಸ್ ಇಲಾಖೆ / POLICE DEPARTMENT**

# Recruitment of Well Being Officers and Senior Well Being Officers on Contract basis in Police Department - 2017

**(ISO: 9001-2008 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)**

**ಅಧಿಸೂಚನೆ ಸಂಖ್ಯೆ: 40/ನೇಮಕಾತಿ-1/2016-17**

**ವಿಷಯ: ಪೊಲೀಸರ ಮಾನಸಿಕ ಸ್ಥೈರ್ಯವನ್ನು ಹೆಚ್ಚಿಸಲು ಹಾಗೂ ಮನೋವೈಜ್ಞಾನಿಕ ಸಲಹೆ ನೀಡಲು ಪೊಲೀಸ್ ಇಲಾಖೆಯಲ್ಲಿ ಸಮಾಲೋಚಕರುಗಳನ್ನು ಮತ್ತು ಹಿರಿಯ ಸಮಾಲೋಚಕರುಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಬಗ್ಗೆ.**

~ ~ * ~ ~

ಪೊಲೀಸ್ ವೃತ್ತಿಯು ಯಾವಾಗಲು ಸವಾಲಿನ ಮತ್ತು ಬದಲಾವಣೆಯ ವೃತ್ತಿಯಾಗಿದ್ದು, ಆಘಾತಕಾರಿ ಘಟಣೆಗಳಿಗೆ ಮತ್ತು ದೈನಂದಿನ ಒತ್ತಡಗಳಿಗೆ ಪೊಲೀಸ್ ಅಧಿಕಾರಿಯು / ಸಿಬ್ಬಂದಿಯು ನಿರಂತರವಾಗಿ ಗುರಿಯಾಗುವುದರಿಂದ ಅವರ ಮನೋಧರ್ಮವನ್ನು ಮತ್ತು ವ್ಯಕ್ತಿತ್ವವನ್ನು ಗಟ್ಟಿಮಾಡಿಕೊಳ್ಳಬೇಕಾಗಿರುತ್ತದೆ. ಈ ಕಾರಣದಿಂದಾಗಿ ಪೊಲೀಸ್ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳಿಗೆ ಮಾನಸಿಕ ಮೌಲ್ಯಮಾಪನ ಮತ್ತು ಆಪ್ತ ಸಮಾಲೋಚನೆ ನೀಡುವ ಅಗತ್ಯವಿರುವುದರಿಂದ ಸರ್ಕಾರವು ಆದೇಶ ಸಂಖ್ಯೆ: ಹೆಚ್‌ಡಿ 230 ಪಿಓಪಿ 2016, ದಿನಾಂಕ: 28.12.2016ರನ್ವಯ 50 ಸಮಾಲೋಚಕರುಗಳನ್ನು ಮತ್ತು 9 ಹಿರಿಯ ಸಮಾಲೋಚಕರುಗಳನ್ನು ಗುತ್ತಿಗೆ ಆಧಾರದ ಮೇರೆಗೆ ನೇಮಕ ಮಾಡಿಕೊಳ್ಳಲು ಮಂಜೂರಾತಿ ನೀಡಿರುತ್ತದೆ.

2. ಸರ್ಕಾರವು ಮೇಲಿನ ಆದೇಶದಲ್ಲಿ ನೀಡಿರುವ ಮಂಜೂರಾತಿಯನುಸಾರ 50 ಸಮಾಲೋಚಕರುಗಳನ್ನು ಮತ್ತು 9 ಹಿರಿಯ ಸಮಾಲೋಚಕರುಗಳನ್ನು ಒಂದು ವರ್ಷ ಅವಧಿಗಾಗಿ ಗುತ್ತಿಗೆ ಆಧಾರದ ಮೇರೆಗೆ ನೇಮಕ ಮಾಡಿಕೊಳ್ಳಲು ಆನ್-ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ನೇಮಕಾತಿಯು ಗುತ್ತಿಗೆ ಆಧಾರದ ಮೇಲೆ ಮಾಡಲಾಗುತ್ತಿರುವ ಕಾರಣ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿಗಳಲ್ಲಿ ಮೀಸಲಾತಿ ಇತ್ಯಾದಿ) ಕಾಯ್ದೆ 1990ಗೆ ಹಾಗೂ ಸರ್ಕಾರದ ಇತರೆ ನೇಮಕಾತಿ ನಿಯಮಗಳಿಗೆ ಒಳಪಟ್ಟಿರುತ್ತದೆ.

**<u>ಅರ್ಜಿಯನ್ನು ಸಲ್ಲಿಸುವ ವಿಧಾನ</u> :** ಅರ್ಜಿಗಳನ್ನು ಆನ್‌ಲೈನ್ (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ದಿನಾಂಕ: 13.04.2017 ರಿಂದ ದಿನಾಂಕ: 27.04.2017 ರ ವರೆಗೆ ಸಲ್ಲಿಸಬಹುದಾಗಿರುತ್ತದೆ.

**ಎ) <u>ಶುಲ್ಕ:</u>**

1) ಅಭ್ಯರ್ಥಿಗಳು ಅರ್ಜಿ ಶುಲ್ಕ ₹.100/-ನ್ನು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (SBI) ನ ಯಾವುದಾದರೂ ಶಾಖೆಗಳಲ್ಲಿ ಬ್ಯಾಂಕಿನ ವೇಳೆಯಲ್ಲಿ ಚಲನ್ ನೀಡಿ ಹಣ ಪಾವತಿಸಬಹುದು.
2) ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಅರ್ಜಿಯನ್ನು ಆನ್‌ಲೈನ್‌ನಲ್ಲಿ ನೀಡಿರುವ ಸೂಚನೆಯಂತೆ ಭರ್ತಿ ಮಾಡತಕ್ಕದ್ದು.
3) ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಸಮಿತಿಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

<u>ಟಿಪ್ಪಣಿ:</u> ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಒಟ್ಟು ಅರ್ಜಿ ಶುಲ್ಕವನ್ನು **ನಗದು ರೂಪದಲ್ಲಿ ಮಾತ್ರ** ಪಾವತಿಸತಕ್ಕದ್ದು. (ಪಾವತಿಸುವ ವಿವರಗಳನ್ನು ಈ ಕೆಳಗಿನ ಪ್ಯಾರಾದಲ್ಲಿ ಸೂಚಿಸಲಾಗಿದೆ). **ಡಿಡಿ, ಇಂಡಿಯನ್ ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

**ಬಿ) <u>ಆನ್–ಲೈನ್ (On-line) ಮುಖಾಂತರ ಸಲ್ಲಿಸುವ ವಿಧಾನ</u> :**

*ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಮಾಹಿತಿ ಸೂಚಿಯಲ್ಲಿನ ವಿವರಗಳನ್ನು ಓದಿಕೊಳ್ಳುವುದು. ಭಾವಚಿತ್ರ ಮತ್ತು ಸಹಿ (ಜೆಪಿಜಿ / ಜಿಫ್ ಫಾರ್ಮಾಟ್‌ನಲ್ಲಿ 100 ಕೆ.ಬಿ. ಒಳಗಿರಬೇಕು).*

ಅಭ್ಯರ್ಥಿಗಳು ಆನ್–ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಲು ಇಲಾಖೆಯ ಅಧಿಕೃತ ವೆಬ್‌ಸೈಟ್ http://ww.ksp.gov.in/ ನಲ್ಲಿ Current Recruitment ಮೇಲೆ ಕ್ಲಿಕ್ ಮಾಡಬೇಕು ನಂತರ Well Being Officers / Senior Well Being Officers -Recruitment-2017 ಮೇಲೆ ಕ್ಲಿಕ್ ಮಾಡಿ ತದನಂತರ Application ಮೇಲೆ ಕ್ಲಿಕ್ ಮಾಡಿದಾಗ ಸೂಚನೆಗಳ ಪರದೆ ಮೂಡುತ್ತದೆ. ಸೂಚನೆಗಳನ್ನು ಪೂರ್ಣವಾಗಿ ತಿಳಿದುಕೊಂಡು ಅಂತಿಮವಾಗಿ 'ನಾನು ಮೇಲ್ಕಂಡ ಸೂಚನೆಗಳನ್ನು ಓದಿರುತ್ತೇನೆ' ಎಂದು ಒಪ್ಪಿಕೊಂಡು ನೀಡಿರುವ ಬಟನ್ ಮೇಲೆ ಕ್ಲಿಕ್ ಮಾಡಿದ ನಂತರ ಸಿಂಧುಗೊಳಿಸುವ ನಮೂನೆ (User Validation Form) ಮೇಲೆ ನೀಡಿರುವ ಕೋಡ್‌ನ್ನು ತುಂಬಬೇಕು.

**<u>ಮೊದಲನೇ ಭಾಗ</u>** : ಅರ್ಜಿಯ **ಮೊದಲನೇ ಭಾಗ** ಪರದೆಯ ಮೇಲೆ ಮೂಡುವುದು ಅದರಲ್ಲಿರುವ ವಿವರಗಳನ್ನು ಭರ್ತಿ ಮಾಡುವುದು, ಅರ್ಜಿಯ ಮೊದಲ ಭಾಗ ಭರ್ತಿ ಮಾಡಿದ ನಂತರ ಎಲ್ಲಾ ವಿವರಗಳನ್ನು ಮತ್ತೊಮ್ಮೆ ಪರಿಶೀಲಿಸಿ, ಏನಾದರೂ ತಪ್ಪುಗಳಾಗಿದ್ದಲ್ಲಿ ಅದನ್ನು ಸರಿಪಡಿಸಿ ಕೊನೆಯಲ್ಲಿ Next ಬಟನ್ ಮೇಲೆ ಕ್ಲಿಕ್ ಮಾಡುವುದು.

**<u>ಎರಡನೇ ಭಾಗ</u>** : ವಿದ್ಯಾರ್ಹತೆ ಇತ್ಯಾದಿಗಳನ್ನು ಭರ್ತಿ ಮಾಡುವುದು ನಂತರ ಎಲ್ಲಾ ವಿವರಗಳನ್ನು ಮತ್ತೊಮ್ಮೆ ಪರಿಶೀಲಿಸಿ ಕೊನೆಯಲ್ಲಿ Next ಬಟನ್ ಮೇಲೆ ಕ್ಲಿಕ್ ಮಾಡುವುದು. ಯಾವ ದಾಖಲಾತಿಗಳನ್ನು ಅರ್ಜಿ ಸಲ್ಲಿಸುವ ಹಂತದಲ್ಲಿ ಅಪ್‌ಲೋಡ್ ಮಾಡುವ ಅವಶ್ಯಕತೆ ಇರುವುದಿಲ್ಲ.

**<u>ಮೂರನೇ ಭಾಗ</u>** : ಮೊದಲನೇ ಮತ್ತು ಎರಡನೇ ಭಾಗದಲ್ಲಿ ಅಪ್‌ಲೋಡ್ ಮಾಡಲಾದ ವಿವರಗಳು, ಭಾವಚಿತ್ರ ಮತ್ತು ಸಹಿ, ಇತ್ಯಾದಿ ಸರಿಯಾಗಿರುತ್ತವೆಯೆಂದು ಮನದಟ್ಟು ಮಾಡಿಕೊಂಡ ನಂತರ Registration of Application ಕ್ಲಿಕ್ ಮಾಡಿ ನಂತರ ನಿಮ್ಮ ಆನ್‌ಲೈನ್ ಅರ್ಜಿ ಸಂಖ್ಯೆ ಸೃಜನೆಯಾಗುತ್ತದೆ. ನಂತರ Generate Challan **ಬಟನ್** ಮೇಲೆ ಕ್ಲಿಕ್ ಮಾಡಿದಾಗ ಶುಲ್ಕ ಪಾವತಿಸಲು ಒಂದು ತ್ರಿಪ್ರತಿ (Triplicate) ಚಲನ್ ತಯಾರಾಗುತ್ತದೆ ಹಾಗೂ ಚಲನ್‌ನಲ್ಲಿ ಅರ್ಜಿ ಸಂಖ್ಯೆಯು ಸೃಜನೆಯಾಗುತ್ತದೆ ಇದನ್ನು ಮುದ್ರಿಸಿಕೊಳ್ಳಬೇಕು. ಆ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಅರ್ಜಿ ಶುಲ್ಕವನ್ನು ನಗದು ರೂಪದಲ್ಲಿ ಬ್ಯಾಂಕ್ ಚಲನ್ ಮುಖಾಂತರ ಪಾವತಿಸಬೇಕಾಗಿರುತ್ತದೆ ಅರ್ಜಿ ಶುಲ್ಕವನ್ನು ಅಧಿಕೃತ SBI ನಲ್ಲಿ ಮಾತ್ರ ಪಾವತಿಸಬೇಕು (ವೆಬ್‌ಸೈಟ್‌ನಲ್ಲಿ ಅಧಿಕೃತ ಬ್ಯಾಂಕ್‌ಗಳ ಬಗ್ಗೆ ಮಾಹಿತಿ ನೀಡಲಾಗಿದೆ). ಬ್ಯಾಂಕ್‌ನಲ್ಲಿ ಹಣ ಪಾವತಿಸಿದ ನಂತರ ಬ್ಯಾಂಕ್‌ನವರು ಚಲನ್‌ನೊಂದಿಗೆ ಜರ್ನಲ್ ನಂಬರ್ ಹಾಗೂ ದಿನಾಂಕವನ್ನು ನೀಡುವರು.

**<u>ನಾಲ್ಕನೇ ಭಾಗ</u>** : ಬ್ಯಾಂಕ್ ಚಲನ್‌ನ್ನು ಸ್ಕ್ಯಾನ್ ಮಾಡಿಟ್ಟುಕೊಂಡಿರುತಕ್ಕದ್ದು. ಮತ್ತೊಮ್ಮೆ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಹೋಗಿ My Application / Complete Application ನ್ನು ಕ್ಲಿಕ್ ಮಾಡಿ ಆನ್‌ಲೈನ್ ಅರ್ಜಿ ಸಂಖ್ಯೆ ಮತ್ತು ಹುಟ್ಟಿದ ದಿನಾಂಕ ನಮೂದಿಸಿ Submit ಮೇಲೆ ಕ್ಲಿಕ್ ಮಾಡಿದಾಗ ಈ ಹಿಂದೆ ಅಪ್‌ಲೋಡ್ ಮಾಡಲಾದ ದಾಖಲಾತಿಗಳು ಮೂಡುವುದು ಏನಾದರೂ ತಪ್ಪುಗಳಾಗಿದ್ದಲ್ಲಿ Update ಮೇಲೆ ಕ್ಲಿಕ್ ಮಾಡಿ ತಿದ್ದುಪಡಿಗಳನ್ನು ಮಾಡಬಹುದು. ಕೊನೆಯಲ್ಲಿ Generate Application ಮೇಲೆ ಕ್ಲಿಕ್ ಮಾಡುವುದು.

**<u>ಐದನೇ ಭಾಗ</u>** : Journal No, Bank Branch Code ಮತ್ತು ಸ್ಕ್ಯಾನ್ ಮಾಡಲಾದ ಬ್ಯಾಂಕ್ ಚಲನ್‌ನ್ನು ಅಪ್‌ಲೋಡ್ ಮಾಡಿ ಘೋಷಣೆ ಓದಿಕೊಂಡು Registration of Application ಕ್ಲಿಕ್ ಮಾಡಿ ಕೊನೆಯಲ್ಲಿ ನಿಮ್ಮ ಪೂರ್ಣ ಅರ್ಜಿ ಪಡೆಯಲು Print Application ಮೇಲೆ ಕ್ಲಿಕ್ ಮಾಡಿದಾಗ ಅರ್ಜಿಯ ಪ್ರತಿ ಮೂಡುತ್ತದೆ. **<u>ಈ ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು.</u>**

- **ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 13.04.2017, ಬೆಳಗ್ಗೆ 10.00 ಗಂಟೆಗೆ**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 27.04.2017, ಸಂಜೆ 06.00 ಗಂಟೆಗೆ**
- **ಅರ್ಜಿ ಶುಲ್ಕವನ್ನು ಅಧಿಕೃತ ಬ್ಯಾಂಕ್ ಕಛೇರಿ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 28.04.2017**

<u>**ಗಮನಕ್ಕೆ**</u>: ಅರ್ಜಿ ಶುಲ್ಕವನ್ನು ಪಾವತಿಸುವವರು ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು.

<u>**ಸೂಚನೆ:**</u> ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಮಾತ್ರ ಭರ್ತಿ ಮಾಡಿ ನಿಗದಿತ ದಿನಾಂಕದೊಳಗೆ ಸಲ್ಲಿಸಲಾಗುವ ಅರ್ಜಿಯನ್ನು ಪರಿಗಣಿಸಲಾಗುವುದು.

ಸಮಾಲೋಚಕರು / ಹಿರಿಯ ಸಮಾಲೋಚಕರು ಹುದ್ದೆಗಳ ನೇಮಕಾತಿಗೆ ಈ ಕೆಳಕಂಡ ಷರತ್ತುಗಳನ್ನು ಪೂರೈಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ.

**ಎ) ವಯೋಮಿತಿ :**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ ದಿನಾಂಕ: 27.04.2017ಕ್ಕೆ ಈ ಕೆಳಕಂಡ ವಯಸ್ಸು ಮೀರಿರಬಾರದು.

ಸಮಾಲೋಚಕರಿಗೆ – ಗರಿಷ್ಠ 33 ವರ್ಷ

ಹಿರಿಯ ಸಮಾಲೋಚಕರಿಗೆ – ಗರಿಷ್ಠ 35 ವರ್ಷ

**ಬಿ) ವಿದ್ಯಾರ್ಹತೆ :**

ಸಮಾಲೋಚಕರಿಗೆ – M.Sc / M.A Psychology, Preference should be given to M.Phil in Clinical Psychology (Recognized by Rehabilitation Council of India).

ಹಿರಿಯ ಸಮಾಲೋಚಕರಿಗೆ – M.Phil in Clinical Psychology (Recognized by Rehabilitation Council of India) with the minimum experience of one year in the field of Counselling or Psychological Assessment.

**ಆಯ್ಕೆ ವಿಧಾನ :**

**ಎ) ಲಿಖಿತ ಪರೀಕ್ಷೆ :**

ಸಮಾಲೋಚಕರಿಗೆ ಮತ್ತು ಹಿರಿಯ ಸಮಾಲೋಚಕರಿಗೆ : –

**ಪತ್ರಿಕೆ–1 :**

ಅಭ್ಯರ್ಥಿಗಳ ಕನ್ನಡ ಭಾಷಾ ಜ್ಞಾನ ಪರೀಕ್ಷಿಸಲು ಈ ಪ್ರಶ್ನೆ ಪತ್ರಿಕೆಯಲ್ಲಿ ಕನ್ನಡ ಭಾಷೆಯಿಂದ ಆಂಗ್ಲ ಭಾಷೆಗೆ ಮತ್ತು ಆಂಗ್ಲ ಭಾಷೆಯಿಂದ ಕನ್ನಡ ಭಾಷೆಗೆ ಭಾಷಾಂತರಿಸಬೇಕಾಗಿರತ್ತದೆ. ಕನ್ನಡ ಭಾಷೆಯಿಂದ ಆಂಗ್ಲ ಭಾಷೆಗೆ ಭಾಷಾಂತರಿಸಲು 12½ ಅಂಕಗಳನ್ನು ಮತ್ತು ಆಂಗ್ಲ ಭಾಷೆಯಿಂದ ಕನ್ನಡ ಭಾಷೆಗೆ ಭಾಷಾಂತರಿಸಲು 12½ ಅಂಕಗಳನ್ನು ನಿಗಧಿಗೊಳಿಸಲಾಗಿರುತ್ತದೆ. ಸದರಿ ಪತ್ರಿಕೆಯಲ್ಲಿ ಕನಿಷ್ಠ 10 ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ ಪತ್ರಿಕೆ–2ನ್ನು ಮೌಲ್ಯಮಾಪನ ಮಾಡಲಾಗುವುದು. ಪರೀಕ್ಷೆಯ ಅವಧಿಯು ಒಂದು ಗಂಟೆಯದಾಗಿರುತ್ತದೆ. ಪತ್ರಿಕೆ–1 ಕೇವಲ Qualifying nature ಆಗಿರುತ್ತದೆ. ಈ ಪತ್ರಿಕೆಯಲ್ಲಿ ಪಡೆಯುವ ಅಂಕಗಳನ್ನು ಅರ್ಹತಾ ಪಟ್ಟಿ ತಯಾರಿಸಲು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

**ಪತ್ರಿಕೆ–2 :**

ಲಿಖಿತ ಪರೀಕ್ಷೆಯು ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಲಿಖಿತ ಪರೀಕ್ಷೆಯಲ್ಲಿ 50 ಪ್ರಶ್ನೆಗಳನ್ನು ಕೇಳಲಾಗುವುದು. ಪ್ರತಿ ಸರಿ ಉತ್ತರಕ್ಕೆ 2.00 ಅಂಕಗಳನ್ನು ನೀಡಲಾಗುವುದು ಮತ್ತು ಪ್ರತಿ ತಪ್ಪು ಉತ್ತರಕ್ಕೆ 0.25 ಅಂಕಗಳನ್ನು ಕಳೆಯಲಾಗುವುದು. ಪರೀಕ್ಷೆಯ ಅವಧಿಯು ಒಂದು ಗಂಟೆಯದಾಗಿರುತ್ತದೆ. ಸದರಿ ಪ್ರಶ್ನೆ ಪತ್ರಿಕೆಯು ಒಟ್ಟು 100 ಅಂಕಗಳದ್ದಾಗಿರುತ್ತದೆ.

**ಬಿ) ಮೌಖಿಕ ಪರೀಕ್ಷೆ :**

10 ಅಂಕಗಳಿಗೆ ಮೌಖಿಕ ಪರೀಕ್ಷೆಯನ್ನು ನಡೆಸಲಾಗುವುದು. ಪ್ರಶ್ನೆ ಪತ್ರಿಕೆ–2 ರಲ್ಲಿ ಗಳಿಸಿದ ಅಂಕಗಳ ಆಧಾರದ ಅರ್ಹತೆಯ ಮೇರೆಗೆ 1 : 3 ಅನುಪಾತದಲ್ಲಿ ಅಭ್ಯರ್ಥಿಗಳನ್ನು ಮೌಖಿಕ ಪರೀಕ್ಷೆಗೆ ಕರೆಯಲಾಗುವುದು.

**<u>ಇತರೆ ಅರ್ಹತಾ ಷರತ್ತುಗಳು ಮತ್ತು ಸೂಚನೆಗಳು</u> :**

a) ಭಾರತೀಯ ನಾಗರೀಕನಾಗಿರತಕ್ಕದ್ದು.

b) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

c) ಅಭ್ಯರ್ಥಿಯು ನಿಗದಿಪಡಿಸಿರುವ ವಯೋಮಿತಿ ಮತ್ತು ವಿದ್ಯಾರ್ಹತೆಯನ್ನು ಹೊಂದಿರಬೇಕು. ನಿಗದಿಪಡಿಸಲಾಗಿರುವ ವಯೋಮಿತಿ ಮತ್ತು ವಿದ್ಯಾರ್ಹತೆಯನ್ನು ಹೊಂದಿರುವುದಾಗಿ ಅಭ್ಯರ್ಥಿಯು ಸುಳ್ಳು ಮಾಹಿತಿ ನೀಡಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿ ಆಯ್ಕೆಗೊಂಡ ನಂತರ ನೇಮಕಾತಿ ಸಮಿತಿಗೆ ಅಭ್ಯರ್ಥಿಯು ನಿಗದಿಪಡಿಸಲಾಗಿರುವ ವಯೋಮಿತಿ ಮತ್ತು ವಿದ್ಯಾರ್ಹತೆಯನ್ನು ಹೊಂದಿರುವುದಿಲ್ಲವೆಂದು ತಿಳಿದುಬಂದಲ್ಲಿ ಅಂತಹ ಅಭ್ಯರ್ಥಿಯನ್ನು ಯಾವುದೇ ಮುನ್ಸೂಚನೆ ನೀಡದೆ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು.

d) ಪ್ರಶ್ನೆ ಪತ್ರಿಕೆಯಲ್ಲಿ ಯಾವುದಾದರೂ ಮುದ್ರಣ ದೋಷವಾದಲ್ಲಿ ಅದನ್ನು ತಕ್ಷಣ ಕೊಠಡಿಯ ಪರಿವೀಕ್ಷಕರ ಗಮನಕ್ಕೆ ತಂದು ಸರಿಯಾದ ಪ್ರಶ್ನೆ ಪತ್ರಿಕೆ ಪಡೆದುಕೊಂಡು ಉತ್ತರವನ್ನು ಬರೆಯಬೇಕು. ಅಲ್ಲದೇ ಇದರ ಬಗ್ಗೆ ಪರೀಕ್ಷೆ ಮುಗಿದ ನಂತರ ನೇಮಕಾತಿ ಸಮಿತಿಗೆ ಸದರಿ ವಿಷಯದ ಬಗ್ಗೆ ತಿಳಿಸಿದಲ್ಲಿ ಅದನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

e) ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ದಪಡಿಸುವುದರಿಂದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗ ಸೂಚನೆಗಳನ್ನು ನೀಡುತ್ತಾರೆ.

f) ಪರೀಕ್ಷೆ ಮುಗಿದ ಒಂದು ಅಥವಾ ಎರಡು ದಿನಗಳ ನಂತರ Provisional Answer Key ಉತ್ತರಗಳನ್ನು ವೆಬ್‌ಸೈಟ್ ನಲ್ಲಿ ಹಾಗೂ ಸಂಬಂಧಪಟ್ಟ ಘಟಕಗಳಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದಲ್ಲಿ ಅದಕ್ಕೆ ಒಂದು ವಾರದ

ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆಗಳು ಬಂದ ನಂತರ ಅದನ್ನು ಒಂದು ನುರಿತ ಕಮಿಟಿಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು ಅಂತಿಮ ಕೀ ಉತ್ತರಗಳನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಉತ್ತರ ಕೀಗಳ ಪ್ರಕಾರ ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು. ಅಂತಿಮ ಉತ್ತರ ಕೀ (Final Answer Key) ಗಳನ್ನು ಪ್ರಕಟಿಸಿದ ನಂತರ ಯಾವುದೇ ಆಕ್ಷೇಪಣೆಗಳನ್ನು ಪುರಸ್ಕರಿಸಲಾಗುವುದಿಲ್ಲ.

g) ಮೌಖಿಕ ಪರೀಕ್ಷೆಯ ಸಮಯದಲ್ಲಿ ಅಭ್ಯರ್ಥಿಗಳು ತಮ್ಮ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಪದವಿ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರ, ಸ್ನಾತಕೋತ್ತರ ಪದವಿ ಅಂಕ ಪಟ್ಟಿಗಳು ಮತ್ತು ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಮತ್ತು ಅನುಭವದ ಪ್ರಮಾಣ ಪತ್ರಗಳ ನಕಲು ಪ್ರತಿಗಳನ್ನು ಪತ್ರಾಂಕಿತ ಅಧಿಕಾರಿಯಿಂದ ದೃಢೀಕೃತ ಮಾಡಿ ಹಾಜರು ಪಡಿಸಬೇಕಾಗಿರುತ್ತದೆ.

h) ಸಮಾಲೋಚಕರುಗಳನ್ನು ಮತ್ತು ಹಿರಿಯ ಸಮಾಲೋಚಕರುಗಳನ್ನು ಆಯ್ಕೆ ಮಾಡಿದ ನಂತರ ಒಂದು ವರ್ಷದ ಅವಧಿಯವರೆಗೆ ರಾಜ್ಯದ ಯಾವುದೇ ಜಿಲ್ಲೆ / ನಗರ / ವಲಯಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ಒಂದು ವರ್ಷದ ಅವಧಿಯಲ್ಲಿ 2 ತಿಂಗಳ ಮಟ್ಟಿಗೆ ನಿಮ್ಹಾನ್ಸ್‌ನಲ್ಲಿ ತರಬೇತಿಗೆ ಒಳಪಡಿಸಲಾಗುವುದು. ಒಂದು ವೇಳೆ ಆಯ್ಕೆಗೊಂಡ ಅಭ್ಯರ್ಥಿಗಳು ತರಬೇತಿ ಅವಧಿಯನ್ನು ಪೂರ್ಣಗೊಳಿಸಿದ ನಂತರ ಹುದ್ದೆಯನ್ನು ತ್ಯಜಿಸಿದ್ದಲ್ಲಿ ₹.25,000/– ಗಳನ್ನು ಇಲಾಖೆಗೆ ಪಾವತಿಸಿ ನಂತರ ತ್ಯಜಿಸಬೇಕಾಗಿರುತ್ತದೆ. ಇದರ ಬಗ್ಗೆ ಮುಚ್ಚಳಿಕೆ ಪತ್ರ ₹ 50/- Stamp Paper ಮೇಲೆ ಬರೆದು ಕೊಡಲು ಸೂಚಿಸಿದೆ.

i) <u>ಮಾಸಿಕ ವೇತನ</u> :

ಸಮಾಲೋಚಕರಿಗೆ – ₹. 28,000/-

ಹಿರಿಯ ಸಮಾಲೋಚಕರಿಗೆ – ₹. 38,000/-

**ಟಿಪ್ಪಣಿ :– ಮೇಲಿನ ವೇತನ ಅಲ್ಲದೆ ಇತರೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.**

j) ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿಮಾಡುವಾಗ ಅರ್ಜಿಯಲ್ಲಿನ ಎಲ್ಲಾ ಕಾಲಂಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು. ಭರ್ತಿ ಮಾಡಿ ಸಲ್ಲಿಸಿದಂತಹ ಅರ್ಜಿಯಲ್ಲಿನ ಅಂಶ / ಮಾಹಿತಿಗಳನ್ನು ಯಾವುದೇ ಸಂದರ್ಭದಲ್ಲಿ ಬದಲಾವಣೆ ಮಾಡಲಾಗುವುದಿಲ್ಲ.

k) ಅಭ್ಯರ್ಥಿಗಳು ON-LINE ಮುಖಾಂತರ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಸಮಿತಿಯು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಕರೆ ಪತ್ರಗಳನ್ನು ನೀಡಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

l) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಪರೀಕ್ಷಾ ಕೇಂದ್ರ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

m) ಅಭ್ಯರ್ಥಿಗಳು ಯವುದೇ ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು, ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ / ಖುಲಾಸೆ ಆಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದುಕೊಳ್ಳುವ ತೀರ್ಮಾನವೆ ಅಂತಿಮವಾಗಿರುತ್ತದೆ.

n) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರಬೇಕು.

o) ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ವಿವರ / ಮಾಹಿತಿಗಳನ್ನು ಭರ್ತಿಮಾಡಿ ಸಲ್ಲಿಸತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಎಡಗೈ ಹೆಬ್ಬೆಟಿನ ಗುರುತಿಲ್ಲದ ಮತ್ತು ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

p) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿಯ ಹಾಗೂ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 27.04.2017 ಮಾತ್ರ ಅನ್ವಯವಾಗುತ್ತದೆ.

q) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

r) ಪರೀಕ್ಷೆಗೆ ಪ್ರವೇಶವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.

s) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ. ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ / ದಾಖಲೆಗಳನ್ನು ಸಲ್ಲಿಸಿ ನೌಕರಿ ಪಡೆಯುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

t) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

u) **ದುರ್ನಡತೆ :** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು

ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

v) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

w) ಅಭ್ಯರ್ಥಿಗಳು ಸಮಾಲೋಚಕರು ಮತ್ತು ಹಿರಿಯ ಸಮಾಲೋಚಕರ ನೇಮಕಾತಿಗೆ ಸಂಬಂಧಿಸಿದಂತೆ ಸಹಾಯವಾಣಿಗೆ 080-22943346ಗೆ ಸಂಪರ್ಕಿಸಿ ತಮ್ಮ ನೇಮಕಾತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸ್ಪಷ್ಟ ಪಡಿಸಿಕೊಳ್ಳಬಹುದು. ಈ ಸಹಾಯವಾಣಿ ದಿನಾಂಕ 10.04.2017 ರಿಂದ ಪ್ರತಿದಿನ ಬೆಳಗ್ಗೆ 8-00 ರಿಂದ ಸಾಯಂಕಾಲ 8-00 ಗಂಟೆಯವರೆಗೆ ಲಭ್ಯವಿರುತ್ತದೆ. ಅಲ್ಲದೆ ಮೇಲಿಂದ ಮೇಲೆ ನೇಮಕಾತಿಗೆ ಸಂಬಂಧಪಟ್ಟಂತೆ ಬರುವ ಸಾಮಾನ್ಯ ಪ್ರಶ್ನೆಗಳಿಗೆ (Frequenty Asked Questions - FAQ) ಉತ್ತರವನ್ನು www.ksp.gov.in ಪೊಲೀಸ್ ವೆಬ್‌ಸೈಟ್‌ನಲ್ಲಿ ನೋಡಬಹುದು.

ಸಹಿ/-
ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಮತ್ತು ತರಬೇತಿ ಹಾಗೂ ಅಧ್ಯಕ್ಷರು,
ಸಮಾಲೋಚಕರು / ಹಿರಿಯ ಸಮಾಲೋಚಕರ ನೇಮಕಾತಿ ಸಮಿತಿ,
ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು-560 001.